ಕರ್ನಾಟಕ ಸರ್ಕಾರ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ. (ಪಿನ್: 583231) ದೂ.ಸಂ: 08539-221660

ಸಂಖ್ಯೆ : ಸಿಬ್ಬಂದಿ(1)/311/2025-26 ದಿನಾಂಕ: 05.11.2025.

## ಪ್ರಕಟಣೆ

ಕೊಪ್ಪಳ ಜಿಲ್ಲೆಯಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕುಷ್ಟಗಿಯಲ್ಲಿ ಖಾಲಿ ಇರುವ **12-ಶುಶ್ರೂಷಾಧಿಕಾರಿಗಳ, 01-ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು ಹಾಗೂ 01-ಫಾರ್ಮಸಿಸ್ಟ** ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ **ದಿನಾಂಕ: 31-10-2025** ರಿಂದ **15-11-2025 ರವರೆಗೆ ಕೊಪ್ಪಳ ಜಿಲ್ಲಾ ವೆಬ್ ತಾಣ** **www.koppal.nic.in** ನ **ಮೂಲಕ ಅರ್ಜಿಯನ್ನು** ಅಹ್ವಾನಿಸಲಾಗಿತ್ತು. ಆದರೆ 31-10-2025 ರಿಂದ 04-11-2025 ರವರೆಗೆ ಅರ್ಜಿ ಸಲ್ಲಿಸಲು ತಾಂತ್ರಿಕ ದೋಷ ಕಂಡುಬಂದಿರುವುದರಿಂದ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ **ದಿನಾಂಕ: 15-11-2025 ನ್ನು ವಿಸ್ತರಿಸಿ 20-11-2025 ರವರೆಗೆ ಕಾಲಾವಕಾಶ ನೀಡಲಾಗಿದೆ.** ಯಾವುದೇ ಕಾರಣಕ್ಕೂ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

**ಸದಸ್ಯ ಕಾರ್ಯದರ್ಶಿ,**
**ನೇಮಕಾತಿ ಆಯ್ಕೆ ಸಮಿತಿ ಹಾಗೂ**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ**
**ಕಲ್ಯಾಣ ಅಧಿಕಾರಿಗಳು, ಕೊಪ್ಪಳ.**

ಕರ್ನಾಟಕ ಸರ್ಕಾರ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ. (ಪಿನ್: 583231) ದೂ.ಸಂ: 08539-221660

ಸಂಖ್ಯೆ : ಸಿಬ್ಬಂದಿ(1)/311/2025-26

ದಿನಾಂಕ: 28.10.2025.

## ಪ್ರಕಟಣೆ

ಕೊಪ್ಪಳ ಜಿಲ್ಲೆಯಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕುಷ್ಟಗಿಯಲ್ಲಿ ಖಾಲಿ ಇರುವ **12-ಶುಶ್ರೂಷಾಧಿಕಾರಿಗಳ, 01-ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು ಹಾಗೂ 01-ಫಾರ್ಮಸಿಸ್ಟ** ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಿದೆ. ಮೇಲ್ಕಾಣಿಸಿದ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ಪೂರ್ಣ ಪ್ರಮಾಣದ ಹಕ್ಕನ್ನು ಮಾನ್ಯ ಜಿಲ್ಲಾಧಿಕಾರಿಗಳು, ಕೊಪ್ಪಳರವರ ಅಧ್ಯಕ್ಷತೆಯ ಆಯ್ಕೆ ಸಮಿತಿ ಕಾಯ್ದಿರಿಸಿಕೊಂಡಿದೆ. ಆಯ್ಕೆಯನ್ನು ಮೆರಿಟ್ ಕಮ್ ರೋಸ್ಟರ್ ಹಾಗೂ 371(ಜೆ) ಆಧಾರದ ಮೇಲೆ ನಿಯಮಾನುಸಾರ ನೇಮಕಾತಿ ಮಾಡಲಾಗುವುದು. **ಅರ್ಹ ಅಭ್ಯರ್ಥಿಗಳು ದಿನಾಂಕ: 31-10-2025 ರಿಂದ 15-11-2025 ರವರೆಗೆ ಕೊಪ್ಪಳ ಜಿಲ್ಲಾ ವೆಬ್ ತಾಣ www.koppal.nic.in ನ ಮೂಲಕ ಅರ್ಜಿಯನ್ನು ಸಲ್ಲಿಸಬೇಕು.** ಯಾವುದೇ ಕಾರಣಕ್ಕೂ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ www.koppal.nic.in ವೆಬ್‌ಸೈಟ್‌ನಲ್ಲಿ ನೀಡಿರುವ ನೇಮಕಾತಿ ಅಧಿಸೂಚನೆಯನ್ನು ಓದಿಕೊಳ್ಳತಕ್ಕದ್ದು.

ಸದಸ್ಯ ಕಾರ್ಯದರ್ಶಿ,
ನೇಮಕಾತಿ ಆಯ್ಕೆ ಸಮಿತಿ ಹಾಗೂ
ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಅಧಿಕಾರಿಗಳು, ಕೊಪ್ಪಳ.

ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ ಕೊಪ್ಪಳ

ದೂರವಾಣಿ ಸಂಖ್ಯೆ : 08539-221660 / 221602
Email:dhokoppal@gmail.com

ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ಕೊಪ್ಪಳ

ಸಂಖ್ಯೆ : ಸಿಬ್ಬಂದಿ(1)/311/2025-26 ದಿನಾಂಕ: 28.10.2025

## :: ಗುತ್ತಿಗೆ ನೇಮಕಾತಿ ಅಧಿಸೂಚನೆ ::

ಕೊಪ್ಪಳ ಜಿಲ್ಲೆಯಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕುಷ್ಟಗಿಯಲ್ಲಿ ಖಾಲಿ ಇರುವ ಈ ಕೆಳಕಂಡ ಶುಶ್ರೂಷಕರು, ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು ಹಾಗೂ ಫಾರ್ಮಸಿಸ್ಟ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಿದೆ.

**ಖಾಲಿ ಇರುವ ಹುದ್ದೆಗಳ ವಿವರ:-**

| ಕ್ರ.ಸಂ | ಖಾಲಿ ಇರುವ ಹುದ್ದೆಗಳ ಹೆಸರು | ಹುದ್ದೆಗಳ ಸಂಖ್ಯೆ |
|---|---|---|
| 1 | ಶುಶ್ರೂಷಕರು | 12 |
| 2 | ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು | 01 |
| 3 | ಫಾರ್ಮಸಿಸ್ಟ | 01 |

**ಶೈಕ್ಷಣಿಕ ವಿದ್ಯಾರ್ಹತೆ ಮತ್ತು ಹುದ್ದೆಗಳ ವರ್ಗೀಕರಣ:**

| ಕ್ರಸ | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ವೇತನ ರೂ. |
|---|---|---|---|---|
| 1 | ಶುಶ್ರೂಷಕರು | 12 | ಮಾನ್ಯತೆ ಪಡೆದ ಸಂಸ್ಥೆಯಿಂದ ಜಿ.ಎನ್.ಎಂ/ಬಿಎಸ್‌ಸಿ ನರ್ಸಿಂಗ್ ಪದವಿಯನ್ನು ಹೊಂದಿರಬೇಕು. ಕರ್ನಾಟಕ ನರ್ಸಿಂಗ್ ಕೌನ್ಸಿಲ್‌ನಲ್ಲಿ ಕಡ್ಡಾಯವಾಗಿ ನೋಂದಣಿಯಾಗಿರಬೇಕು. | 16,067/- |
| 2 | ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು | 01 | 1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗಶಾಲಾ ತಂತ್ರಜ್ಞತೆಯಲ್ಲಿ ಮೂರು ವರ್ಷದ ಡಿಪ್ಲೋಮಾದಲ್ಲಿ ಉತ್ತೀರ್ಣ ಹೊಂದಿರಬೇಕು.<br>**ಅಥವಾ**<br>2. ದ್ವಿತೀಯಾ ಪಿ.ಯು.ಸಿಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣ ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ 2 ವರ್ಷಗಳ ಪ್ರಯೋಗಶಾಲಾ ತಂತ್ರಜ್ಞರ ತರಬೇತಿ ಪಡೆದಿರಬೇಕು.<br>3. ಪ್ರಯೋಗಶಾಲಾ ತಂತ್ರಜ್ಞರು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯ ನೋಂದಣಿ ಹೊಂದಿರಬೇಕು. | 16,067/- |
| 3 | ಫಾರ್ಮಸಿಸ್ಟ | 01 | **B-pharma/ D-pharma**<br>*ಔಷಧ ವಿತರಕರು ಹುದ್ದೆಗೆ ಅಗತ್ಯ ವಿದ್ಯಾರ್ಹತೆ ಹೊಂದಿದ ಮತ್ತು ರಾಜ್ಯದ ಫಾರ್ಮಸಿ ಕೌನ್ಸಿಲ್ ನಲ್ಲಿ ನೋಂದಣಿಯಾಗಿರಬೇಕು, ಸ್ಥಳೀಯ ರಾಜ್ಯ ಭಾಷೆ ತಿಳಿದಿರುವ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸತಕ್ಕದ್ದು. | 16,067/- |

ಹುದ್ದೆಗಳ ರೋಸ್ಟರ್ ಬಿಂದು

**ಶುಶ್ರೂಷಾಧಿಕಾರಿಗಳು ಒಟ್ಟು ಹುದ್ದೆಗಳ ಸಂಖ್ಯೆ–12**

**ಕಲ್ಯಾಣ ಕರ್ನಾಟಕ–10**

| Category | Others | Female | Rural | Total |
|---|---|---|---|---|
| GM | 01 | 02 | 01 | 04 |
| SC-Cat-C | 01 | - | - | 01 |
| ST | - | 01 | - | 01 |
| 2A | - | 01 | - | 01 |
| 2B | 01 | - | - | 01 |
| 3A | 01 | - | - | 01 |
| 3B | 01 | - | - | 01 |
| **Total** | **05** | **04** | **01** | **10** |

**ಉಳಿಕೆ ಮೂಲ ವೃಂದ–02**

| Category | Others | Female | Total |
|---|---|---|---|
| GM | - | 01 | 01 |
| ST | 01 | - | 01 |
| **Total** | **01** | **01** | **02** |

**ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು ಹುದ್ದೆಗಳ ಸಂಖ್ಯೆ–01**

| | | |
|---|---|---|
| 1 | ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು | GM Others Unreserved |

**ಫಾರ್ಮಸಿಸ್ಟ ಹುದ್ದೆಗಳ ಸಂಖ್ಯೆ–01**

| | | |
|---|---|---|
| 1 | ಫಾರ್ಮಸಿಸ್ಟ | GM Others Unreserved |

**ಆಯ್ಕೆ ವಿಧಾನ :**

- **"ರೋಸ್ಟರ್ ಕಂ ಮೆರಿಟ್ ಸಿಸ್ಟಮ್"** ಅನ್ನು ಕಡ್ಡಾಯವಾಗಿ ಅನುಸರಿಸಲಾಗುವುದು.

**ವೇತನ:**

**ಎಲ್ಲಾ ಸಿಬ್ಬಂಧಿಗಳಿಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ನೀಡಲಾಗುತ್ತಿರುವ ವೇತನದ ಅನ್ವಯ ವೇತನವನ್ನು ನೀಡುವುದು.**

**ಷರತ್ತು ಮತ್ತು ನಿಬಂಧನೆಗಳು**

1. ಗುತ್ತಿಗೆ ಆಧಾರದ ನೌಕರರ ಯಾವುದೇ ಆಯ್ಕೆಯನ್ನು ಮೇಲಿನ ಆಯ್ಕೆ ಸಮಿತಿಯ ಅನುಮೋದನೆ ಇಲ್ಲದೆ ಮಾಡುವಂತಿಲ್ಲ.
2. ಗುತ್ತಿಗೆ ಆಧಾರದ ನೇಮಕಾತಿಯು ತಾತ್ಕಾಲಿಕವಾಗಿದ್ದು, ಗರಿಷ್ಠ 1 ವರ್ಷದ ಅವಧಿಗೆ ಮಾತ್ರ ಸೀಮಿತವಾಗಿರುತ್ತದೆ ಹಾಗೂ ಸದರಿ ನೇಮಕಾತಿಗಳನ್ನು ಕಡ್ಡಾಯವಾಗಿ ನೇರ ಗುತ್ತಿಗೆ (Recruitment through Direct Contract) ಆಧಾರದ ಮೇಲೆ ಕೈಗೊಳ್ಳುವುದು.
3. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಯಸ್ಸು ಗರಿಷ್ಠ 45 ವರ್ಷಗಳೊಳಗೆ ಇರತಕ್ಕದ್ದು.
4. ನೇಮಕಾತಿಯು ಕಾರ್ಯಕ್ರಮದ ಮಾರ್ಗಸೂಚಿಯಂತೆ ಕಾರ್ಯಕ್ರಮದ ಕಾರ್ಯಚಟುವಟಿಕೆಗಳಿಗೆ ಮಾತ್ರ ಸೀಮಿತವಾಗಿರುವುದರಿಂದ ಯಾವುದೇ ಸರ್ಕಾರಿ ಆರೋಗ್ಯ ಸಂಸ್ಥೆಗಳಿಗೆ ನಿಯೋಜನೆಗೆ ಅವಕಾಶವಿರುವುದಿಲ್ಲ.

5. ನೇಮಕಾತಿ ಹೊಂದಿದ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವಾಗ ಎಲ್ಲಾ ಮೂಲ ದಾಖಲೆಗಳನ್ನು ವಿದ್ಯಾರ್ಹತೆಯ ಅಂಕಪಟ್ಟಿ, ಜನ್ಮ ದಿನಾಂಕದ ದಾಖಲಾತಿಯನ್ನು ಆಯ್ಕೆ ಸಮಿತಿಯ ಮುಂದೆ ಹಾಜರು ಪಡಿಸತಕ್ಕದ್ದು.
6. ಆಯ್ಕೆಯ ಅವಧಿಯಲ್ಲಿ ಚಾಲ್ತಿಯಲ್ಲಿರುವ ಹಾಗೂ ಸರ್ಕಾರವು ಆಗಿಂದ್ದಾಗ್ಗೆ ಸೂಚಿಸುವ ಎಲ್ಲಾ ಸೇವಾ ನಿಯಮಗಳನ್ನು ಪಾಲಿಸತಕ್ಕದ್ದು.
7. ಗುತ್ತಿಗೆ ಆಧಾರದ ಮೇಲೆ ಆಯ್ಕೆಗೊಂಡ ಅಭ್ಯರ್ಥಿಗಳು ಖಾಯಂ ನೇಮಕಾತಿಯಾಗಲೀ, ವಿಶ್ರಾಂತಿ ವೇತನಕ್ಕಾಗಲೀ, ನಿವೃತ್ತ ಉಪದಾನ, ವೇತನ ಶ್ರೇಣಿ ಅಥವಾ ಇನ್ನಿತರ ಯಾವುದೇ ಭತ್ಯೆಗಳನ್ನು ಪಡೆಯುವ ಹಕ್ಕನ್ನು ಹೊಂದಿರುವುದಿಲ್ಲ ಮತ್ತು ಅರ್ಹರಿರುವುದಿಲ್ಲ ಹಾಗೂ ಈ ಕುರಿತು ನ್ಯಾಯಾಲಯದಲ್ಲಿ ಪ್ರಶ್ನಿಸುವಂತಿಲ್ಲ.
8. ಆಯ್ಕೆ ಹೊಂದಿದ ಅಭ್ಯರ್ಥಿಗಳು ರಜೆಯನ್ನು ಹಕ್ಕನ್ನಾಗಿ ಕೇಳಿ ಪಡೆಯುವಂತಿಲ್ಲ.
9. ಆಯ್ಕೆಯಾದ ಅಭ್ಯರ್ಥಿಗಳು ಕೇಂದ್ರ ಸ್ಥಾನದಲ್ಲಿ ಕಡ್ಡಾಯವಾಗಿ ವಾಸಮಾಡತಕ್ಕದ್ದು.
10. ದುರ್ನಡತೆಯಿಂದಾಗಿ ಸರ್ಕಾರಕ್ಕೆ ನಷ್ಟ ಉಂಟಾದಲ್ಲಿ ಅದನ್ನು ಸರ್ಕಾರಕ್ಕೆ ತುಂಬಿಕೊಡುವ ಷರತ್ತಿಗೆ ಆಯ್ಕೆಯಾದ ಅಭ್ಯರ್ಥಿಗಳು ಬದ್ದರಾಗತಕ್ಕದ್ದು.
11. ಆಯ್ಕೆಯನ್ನು ಯಾವುದೇ ಸಮಯದಲ್ಲಿ ಯಾವುದೇ ಕಾರಣಗಳಿಲ್ಲದೇ ಪರ್ಯಾವಸಾನಗೊಳಿಸುವ ಹಕ್ಕನ್ನು ಮೇಲಿನ ನೇಮಕಾತಿ ಆಯ್ಕೆ ಸಮಿತಿಯಲ್ಲಿ ಕಾಯ್ದಿರಿಸಲಾಗಿದೆ.
12. ಗುತ್ತಿಗೆ ಆಧಾರದ ಮೇಲೆ ಆಯ್ಕೆ ಹೊಂದಿದವರಿಂದ ಕರ್ತವ್ಯಕ್ಕೆ ಹಾಜರಾಗುವ ಮೊದಲು ಷರತ್ತು ಮತ್ತು ನಿಬಂಧನೆಗಳನ್ನು ಒಪ್ಪಿಕೊಂಡಿರುವಂತೆ ರೂ.100/- ಗಳ ಛಾಪಾಕಾಗದದ ಮೇಲಿನ ಷರತ್ತುಗಳನ್ನು ಒಳಗೊಂಡಂತೆ ಮುಚ್ಚಳಿಕೆಯೊಂದನ್ನು ಪಡೆಯತಕ್ಕದ್ದು.

**ಶುಶ್ರೂಷಾಧಿಕಾರಿಗಳು :**

**ವಿದ್ಯಾರ್ಹತೆ:**

ನರ್ಸಿಂಗ್ ವಿದ್ಯಾರ್ಹತೆಯನ್ನು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪಡೆದಿರಬೇಕು ಹಾಗೂ ಕರ್ನಾಟಕ ನರ್ಸಿಂಗ್ ಕೌನ್ಸಿಲಿಂಗ್ ನಲ್ಲಿ ನೋಂದಣಿಯಾಗಿರಬೇಕು.

**Experience:** 2 ವರ್ಷಗಳ ಅನುಭವ

**ವಯೋಮಿತಿ:** 45 ವರ್ಷಗಳು

**ವೇತನ:**

| ವಿವರ | ಅನುದಾನವನ್ನು ಬಳಸಿಕೊಳ್ಳಬೇಕಾದ ವಿವರ |
|---|---|
| ಶುಶ್ರೂಷಾಧಿಕಾರಿಗಳು | • ಹೊಸದಾಗಿ ನೇಮಕಾತಿ ಪ್ರಕ್ರಿಯೆಗೆ ಒಳಪಡುವ ಶುಶ್ರೂಷಕರಿಗೆ ವೇತನವನ್ನು ಕನಿಷ್ಠ ವೇತನ ಮಾರ್ಗಸೂಚಿಯಂತೆ (Minimum wages) ಪಾವತಿಸುವುದು. |

**ಪ್ರಯೋಗಶಾಲಾ ತಂತ್ರಜ್ಞರು:**

**ವಿದ್ಯಾರ್ಹತೆ:**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗಶಾಲಾ ತಂತ್ರಜ್ಞತೆಯಲ್ಲಿ ಮೂರು ವರ್ಷದ ಡಿಪ್ಲೋಮಾದಲ್ಲಿ ಉತ್ತೀರ್ಣ ಹೊಂದಿರಬೇಕು.

**ಅಥವಾ**

2. ದ್ವಿತೀಯಾ ಪಿ.ಯು.ಸಿಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣ ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ 2 ವರ್ಷಗಳ ಪ್ರಯೋಗಶಾಲಾ ತಂತ್ರಜ್ಞರ ತರಬೇತಿ ಪಡೆದಿರಬೇಕು.

3. ಪ್ರಯೋಗಶಾಲಾ ತಂತ್ರಜ್ಞರು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯ ನೋಂದಣಿ ಹೊಂದಿರಬೇಕು.

**Experience:**2 ವರ್ಷಗಳ ಅನುಭವ
**ವಯೋಮಿತಿ:** 45 ವರ್ಷಗಳು
**ವೇತನ:**

| ವಿವರ | ಅನುದಾನವನ್ನು ಬಳಸಿಕೊಳ್ಳಬೇಕಾದ ವಿವರ |
|---|---|
| ಪ್ರಯೋಗಶಾಲಾ ತಂತ್ರಜ್ಞರು | • ಹೊಸದಾಗಿ ನೇಮಕಾತಿ ಪ್ರಕ್ರಿಯೆಗೆ ಒಳಪಡುವ ಪ್ರಯೋಗಶಾಲಾ ತಂತ್ರಜ್ಞರು ವೇತನವನ್ನು ಕನಿಷ್ಠ ವೇತನ ಮಾರ್ಗಸೂಚಿಯಂತೆ (Minimum wages) ಪಾವತಿಸುವುದು |

**ಫಾರ್ಮಾಸಿಸ್ಟ್:**
**ವಿದ್ಯಾರ್ಹತೆ: B-pharma/ D-pharma**

- ಔಷಧ ವಿತರಕರು ಹುದ್ದೆಗೆ ಅಗತ್ಯ ವಿದ್ಯಾರ್ಹತೆ ಹೊಂದಿದ ಮತ್ತು ರಾಜ್ಯದ ಫಾರ್ಮಸಿ ಕೌನ್ಸಿಲ್ ನಲ್ಲಿ ನೋಂದಣಿಯಾಗಿರಬೇಕು, ಸ್ಥಳೀಯ ರಾಜ್ಯ ಭಾಷೆ ತಿಳಿದಿರುವ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸತಕ್ಕದ್ದು.

**ವಯೋಮಿತಿ:** 45 ವರ್ಷ
**ವೇತನ:**

| ವಿವರ | ಅನುದಾನವನ್ನು ಬಳಸಿಕೊಳ್ಳಬೇಕಾದ ವಿವರ |
|---|---|
| **ಫಾರ್ಮಾಸಿಸ್ಟ್:** | ಹೊಸದಾಗಿ ನೇಮಕಾತಿ ಪ್ರಕ್ರಿಯೆಗೆ ಒಳಪಡುವ ಫಾರ್ಮಾಸಿಸ್ಟ್ ವೇತನವನ್ನು ಕನಿಷ್ಠ ವೇತನ ಮಾರ್ಗಸೂಚಿಯಂತೆ (Minimum wages) ಪಾವತಿಸುವುದು |

**ಅರ್ಜಿ ಸಲ್ಲಿಸುವ ವಿಧಾನ:** ಪ್ರಾಧಿಕಾರದ ವೆಬ್‌ಸೈಟ್ http://www.koppal.nic.in ನಲ್ಲಿ ತೋರಿಸುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು **ಪ್ರಾರಂಭಿಕ ದಿನಾಂಕ: 31.10.2025 ಮತ್ತು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15.11.2025 ಸಂಜೆ 5.30ರ ವರೆಗೆ.** ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು, ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

## 1–ಸಾಮಾನ್ಯ ಸೂಚನೆಗಳು:

- **ಹುದ್ದೆಗಳ ಸಂಖ್ಯೆಗಳನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಅಧಿಕಾರವನ್ನು ನೇಮಕಾತಿ ಆಯ್ಕೆ ಸಮಿತಿ ಹೊಂದಿರುತ್ತದೆ. ಹುದ್ದೆಗಳ ಸಂಖ್ಯೆಯು ಹೆಚ್ಚಾದಾಗ ಮುಂದುವರೆದ ರೋಸ್ಟರ್ ಬಿಂದುವನ್ನು ಪರಿಗಣಿಸುವುದರಿಂದ ಎಲ್ಲಾ ಅಭ್ಯರ್ಥಿಗಳೂ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಮತ್ತು ತಮ್ಮ ಮೀಸಲಾತಿಗೆ ಸಂಬಂಧಿಸಿದ ದಾಖಲೆಗಳನ್ನು ಅಪ್‌ಲೋಡ್ ಮಾಡತಕ್ಕದ್ದು.**
- ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು missed roster ಎಂದು ಪರಿಗಣಿಸಿ ಮುಂದಿನ ರೋಸ್ಟರ್ ಬಿಂದುವಿನ ಅಭ್ಯರ್ಥಿಯನ್ನು ನೇಮಕಾತಿ ಮಾಡಿಕೊಳ್ಳಲಾಗುವುದು. ಕಾರಣ ಎಲ್ಲ ಅಭ್ಯರ್ಥಿಗಳೂ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ.

- ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಹ ಮೀಸಲಾತಿ ಅಭ್ಯರ್ಥಿಗಳು ದೊರೆಯದಿದ್ದಲ್ಲಿ ಮಾತ್ರ ಸಾಮಾನ್ಯ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು. ಕಾರಣ ಎಲ್ಲ ಅಭ್ಯರ್ಥಿಗಳೂ ಅರ್ಜಿಯನ್ನು ಸಲ್ಲಿಸಬಹುದಾಗಿದೆ.
- ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕುಷ್ಟಗಿಯಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರವನ್ನು www.koppal.nic.in ಈ ಜಾಲತಾಣದಲ್ಲಿ ಲಭ್ಯವಿದ್ದು ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು ಭಾರತೀಯ ನಾಗರಿಕನಾಗಿರತಕ್ಕದ್ದು.
- ನೇಮಕಾತಿ ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೋರಿಯರ್ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- **ಅಭ್ಯರ್ಥಿಗಳು ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಅನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ, ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ನೀಡಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**
- ಈ ನೇಮಕಾತಿ ಸಂಬಂಧ ಅಭ್ಯರ್ಥಿಗಳು ಕೇಳುವ ಸ್ಪಷ್ಟಿಕರಣ, ಪ್ರಶ್ನೋತ್ತರಗಳು, ತಕರಾರು ಇತ್ಯಾದಿಗಳಿಗೆ ಪತ್ರ/ಇ–ಮೇಲ್ ವ್ಯವಹಾರಗಳಿಗೆ ಯಾವುದೇ ಅವಕಾಶವಿರುವುದಿಲ್ಲ.
- **ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ:–31.10.2025 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:–15.11.2025.**
- ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ, ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
- ಕನ್ನಡ ಭಾಷಾ ಜ್ಞಾನ ಓದುವುದು, ಬರೆಯುವುದು ಮತ್ತು ಮಾತನಾಡುವುದು ಕಡ್ಡಾಯವಾಗಿರುತ್ತದೆ.
- ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ/ಇತರ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ, ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ/ರದ್ದುಪಡಿಸುವ ಅಧಿಕಾರವನ್ನು ನೇಮಕಾತಿ ಆಯ್ಕೆ ಸಮಿತಿ ಹೊಂದಿರುತ್ತದೆ. ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ವಿಶ್ವವಿದ್ಯಾಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಶುಶ್ರೂಷಾಧಿಕಾರಿಗಳ, ಕಿರಿಯ ಪ್ರಯೋಗ ಶಾಲಾ ತಂತ್ರಜ್ಞ, ಫಾರ್ಮಸಿಸ್ಟ ನೇಮಕಾತಿ ಆಯ್ಕೆ ಸಮಿತಿಯು ಕಾಯ್ದಿರಿಸಿಕೊಂಡಿದೆ.
- ಅನುಭವ ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆಯನ್ನು ಪಡೆದ ನಂತರ ಹೊಂದಿರುವ ಆಯಾ ಕ್ಷೇತ್ರ/ ಹುದ್ದೆಗೆ ಸಂಬಂಧಪಟ್ಟ ನಿರ್ಧಿಷ್ಟ ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ONLINE ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು On-Line ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಯನ್ನು ಅಪ್‌ಲೋಡ್ ಮಾಡತಕ್ಕದ್ದು, ಮೂಲ ದಾಖಲಾತಿಗೆ

ಹಾಜರಾಗುವ ಅರ್ಹ ಅಭ್ಯರ್ಥಿಗಳು ತಾವು ಸಲ್ಲಿಸಿದ ಎಲ್ಲಾ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

**2. ವಯೋಮಿತಿ:**

ನೇಮಕಾತಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 15.11.2025ಕ್ಕೆ ನಿಗದಿಪಡಿಸಲಾಗಿದ್ದು, ಈ ದಿನಾಂಕಕ್ಕೆ ಅಭ್ಯರ್ಥಿಗಳ ಕನಿಷ್ಠ / ಗರಿಷ್ಟ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| ಕ್ರ.ಸಂ | ಹುದ್ದೆ | ಕನಿಷ್ಠ ವಯೋಮಿತಿ | ಗರಿಷ್ಠ ವಯೋಮಿತಿ |
|---|---|---|---|
| 1 | ಶುಶ್ರೂಷಾಧಿಕಾರಿಗಳು | 18 | 45 |
| 2 | ಕಿರಿಯ ಪ್ರಯೋಗ ಶಾಲಾ ತಂತ್ರಜ್ಞ | 18 | 45 |
| 3 | ಫಾರ್ಮಸಿಸ್ಟ | 18 | 45 |

**3. ಮೀಸಲಾತಿಗಳು**

ಜಾತಿ/ವರ್ಗ ಮೀಸಲಾತಿ, ಕೋರಬಯಸುವ ಅಭ್ಯರ್ಥಿಗಳು ಇದಕ್ಕೆ ಸಂಬಂಧಿಸಿದಂತೆ ಸರ್ಕಾರವು ನಿಗದಿಪಡಿಸಿರುವ ನಮೂನೆಗಳಲ್ಲಿ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.

**ಅಭ್ಯರ್ಥಿಯ ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಮೂಲ ಪ್ರಮಾಣ ಪತ್ರಗಳು: ಈ ಕೆಳಕಂಡಂತೆ ಇರುತ್ತವೆ.**

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ/ಎಲ್ಲಾ ಸೆಮಿಸ್ಟರ್‌ಗಳ/ವರ್ಷಗಳ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು. (ಇಂಟರ್ನ್‌ಶಿಫ್ ಅಂಕಗಳನ್ನು ಪರಿಗಣಿಸುವುದಿಲ್ಲ.)
2. ಸಂಬಂಧಿಸಿದ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸಿದ ಪ್ರಮಾಣ ಪತ್ರಗಳನ್ನು ಹಾಜರುಪಡಿಸಬೇಕು.
3. **ಜನ್ಮ ದಿನಾಂಕವನ್ನು ಪರಿಗಣಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿಯನ್ನು ಅಪ್‌ಲೋಡ್ ಮಾಡತಕ್ಕದ್ದು.**
4. ದ್ವಿತೀಯಾ ಪಿ.ಯು.ಸಿಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣರಾಗಿ ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ 2 ವರ್ಷಗಳ ಪ್ರಯೋಗಶಾಲಾ ತಂತ್ರಜ್ಞರ ವ್ಯಾಸಾಂಗ ಮಾಡಿದಲ್ಲಿ ಪಿ.ಯು.ಸಿ ಅಂಕಪಟ್ಟಿಯನ್ನು ಅಪ್‌ಲೋಡ್ ಮಾಡತಕ್ಕದ್ದು.
5. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.
6. ಅನುಭವ/ನಿರಾಕ್ಷೇಪಣಾ ಪ್ರಮಾಣ ಪತ್ರಗಳು.

ನೇಮಕಾತಿ ಆಯ್ಕೆ ಸಮಿತಿಯು ನಿಗದಿಪಡಿಸಿದ ಸ್ಥಳದಲ್ಲಿ ದಾಖಲಾತಿಗಳ ಪರಿಶೀಲನೆಗೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು, ಅಭ್ಯರ್ಥಿಗಳು ಅಪ್‌ಲೋಡ್ ಮಾಡಿದ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ದಾಖಲೆಗಳನ್ನು ಪರಿಶೀಲನೆ ಮಾಡುವ ದಿನಾಂಕವನ್ನು **www.koppal.nic.in** ತಿಳಿಸಲಾಗುವುದು. ಅಭ್ಯರ್ಥಿಗಳ ಆಯ್ಕೆ ಬಗ್ಗೆ ನೇಮಕಾತಿ ಆಯ್ಕೆ ಸಮಿತಿ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

**ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಕುರಿತು:**

- ಭಾವಚಿತ್ರ 100ಕೆ.ಬಿ ಗಿಂತ ಕಡಿಮೆ ಗಾತ್ರ ಇರುವ ಪಾಸ್‌ಪೋರ್ಟ್ ಭಾವ ಚಿತ್ರ ಅಪ್‌ಲೋಡ್ ಮಾಡತಕ್ಕದ್ದು ಮತ್ತು 50 ಕೆ.ಬಿ ಗಿಂತ ಕಡಿಮೆ ಗಾತ್ರವಿರುವ ಮಾದರಿ ಸಹಿಯ ಚಿತ್ರವನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
- ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಅಭ್ಯರ್ಥಿಯು ಸಂಬಂಧಪಟ್ಟ ವಿದ್ಯಾರ್ಹತೆ, ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ನೊಂದಣಿ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ ಮೀಸಲಾತಿ ಪ್ರಮಾಣಗಳನ್ನು ಸ್ಕಾನ್ ಮಾಡಿ Upload ಮಾಡತಕ್ಕದ್ದು.

**ಅಭ್ಯರ್ಥಿಗಳು** On-Line: **ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಗಳನ್ನು ಅಪ್‌ಲೋಡ್ ಮಾಡತಕ್ಕದ್ದು, ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು/ ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ ದಿನಾಂಕ:15.11.2025 ರೊಳಗೆ ಪಡೆದಿರಬೇಕು. ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಆಯ್ಕೆ ಸಮಿತಿ ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.**

**ಮೀಸಲಾತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :**

1. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ. ಇತರೆ ವರ್ಗಗಳ ಮೀಸಲಾತಿ ಕೋರುವ ಅಭ್ಯರ್ಥಿಯು ನಿಗದಿತ ನಮೂನೆಯಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ.
2. 371ಜೆ ಪ್ರಮಾಣ ಪತ್ರ (ಅಸಿಸ್ಟೆಂಟ್ ಕಮೀಷನರ್‌ವರಿಂದ ಪಡೆದ ಪ್ರಮಾಣ ಪತ್ರ)

**ಪ್ರಮುಖ ಸೂಚನೆಗಳು:-**

1. ಅಭ್ಯರ್ಥಿಗಳು Online ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಮೂಲ ದಾಖಲಾತಿಗೆ ಅರ್ಹರೆ ಎಂಬುದನ್ನು ನೇಮಕಾತಿ ಆಯ್ಕೆ ಸಮಿತಿ ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಮೂಲದಾಖಲಾತಿ ಪರಿಶೀಲನೆಗೆ ಕರೆಯಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ ಪ್ರಮಾಣ ಪತ್ರ, ಅನುಭವ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ, ಅನರ್ಹರೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸುವ ಹಕ್ಕು ನೇಮಕಾತಿ ಆಯ್ಕೆ ಸಮಿತಿಗೆ ಇರುತ್ತದೆ.
3. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಹಾಗೂ ಅನುಭವ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ, ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು, ನೊಂದಣಿ ಪ್ರಮಾಣ ಪತ್ರ, ಅನುಭವ, ಮೀಸಲಾತಿ, ವಯೋಮಿತಿ ಮುಂತಾದ ಅವಶ್ಯಕ ದಾಖಲೆಗಳ ಪ್ರತಿಗಳನ್ನು ಆನ್-ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಅಸ್ಪಷ್ಟ, ಅಪೂರ್ಣ,

ಭಾವಚಿತ್ರ ಇಲ್ಲದ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೊ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
6. ಅಭ್ಯರ್ಥಿಗಳು ಅರ್ಜಿಗಳನ್ನು Online ಮೂಲಕ Upload ಮಾಡಿದ ನಂತರ ಸ್ಪಷ್ಟವಾಗಿ ಹಾಗೂ ನಿರ್ದಿಷ್ಟ ಗಾತ್ರದಲ್ಲಿ Upload ಮಾಡಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು.
7. ಇತ್ತೀಚಿನ ಎನ್.ಹೆಚ್.ಎಂ ನೇಮಕಾತಿ ಮಾರ್ಗಸೂಚಿಯನ್ವಯ ನೇಮಕಾತಿಯನ್ನು ಮಾಡಿಕೊಳ್ಳಲಾಗುವುದು ಹಾಗೂ ಎನ್.ಹೆಚ್.ಎಂ ಮಾರ್ಗಸೂಚಿಯನ್ವಯ ವೇತನವನ್ನು ಪಾವತಿಸಲಾಗುವುದು.
8. ನೇಮಕಾತಿ ಅಧಿಸೂಚನೆ ಹೊರಡಿಸಿದ ಒಂದು ವರ್ಷದ ಒಳಗೆ ಹುದ್ದೆಗಳು ಯಾವುದೇ ಸಮಯದಲ್ಲಿ ತೆರವಾದಲ್ಲಿ ಇದೇ ನೇಮಕಾತಿಯ ಕಾಯ್ದಿರಿಸಿದ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನೇ ಮುಂದುವರೆದ ರೋಸ್ಟರ್ ಕಮ್ ಮೆರಿಟ್ & 371ಜೆ ಆಧಾರದ ಮೇಲೆ ಆಯ್ಕೆಮಾಡಲಾಗುವದು.

**ವಿಶೇಷ ಸೂಚನೆ: ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಅನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು, ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಸ್ಪಷ್ಟವಾದ ದಾಖಲೆಗಳನ್ನು ಅಪ್‌ಲೋಡ್ ಮಾಡತಕ್ಕದ್ದು. ಅಭ್ಯರ್ಥಿಗಳು ಅಪ್‌ಲೋಡ್ ಮಾಡುವ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ತದ ನಂತರದಲ್ಲಿ ಮನವಿ ಮುಖಾಂತರ ಯಾವುದೇ ದಾಖಲೆಗಳನ್ನು ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.**

**ಸದಸ್ಯ ಕಾರ್ಯದರ್ಶಿ,**
**ನೇಮಕಾತಿ ಆಯ್ಕೆ ಸಮಿತಿ ಹಾಗೂ**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ**
**ಕಲ್ಯಾಣ ಅಧಿಕಾರಿಗಳು, ಕೊಪ್ಪಳ**